# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

ಮುಕ್ತಗಂಗೋತ್ರಿ, ಮೈಸೂರು – ೫೭೦ ೦೦೬

**ದಿನಾಂಕ: 12.12.2025** ರಂದು ಮಧ್ಯಾಹ್ನ **1:00** ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಮಾನ್ಯ ಕುಲಪತಿಗಳ ಕಚೇರಿ ಸಭಾಂಗಣದಲ್ಲಿ ನಡೆದ 39ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ನಡಾವಳಿ.

| **ಉಪಸ್ಥಿತ ಶೈಕ್ಷಣಿಕ ಮಂಡಳಿ ಸದಸ್ಯರು** | |
|---|---|
| **ಪ್ರೊ. ಶರಣಪ್ಪ ವಿ. ಹಲಸೆ**<br>ಮಾನ್ಯ ಕುಲಪತಿಗಳು ಹಾಗು ಅಧ್ಯಕ್ಷರು<br>ಶೈಕ್ಷಣಿಕ ಮಂಡಳಿ, ಕರಾಮುವಿ, ಮೈಸೂರು. | **ಪ್ರೊ. ನವೀನ್ ಕುಮಾರ್ ಎಸ್.ಕೆ**<br>ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ<br>ಶೈಕ್ಷಣಿಕ ಮಂಡಳಿ, ಕರಾಮುವಿ, ಮೈಸೂರು. |
| **ಪ್ರೊ. ಎಂ. ರಾಮನಾಥಂ ನಾಯುಡು**<br>ಡೀನ್ (ಶೈಕ್ಷಣಿಕ),<br>ಮತ್ತು ಸ್ಕೂಲ್ ನಿರ್ದೇಶಕರು, ಭಾಷ ನಿಕಾಯ,<br>ಕರಾಮುವಿ, ಮೈಸೂರು. | **ಡಾ. ಸಿ.ಎಸ್. ಆನಂದಕುಮಾರ್**<br>ಕುಲಸಚಿವರು (ಪರೀಕ್ಷಾಂಗ)<br>ಕರಾಮುವಿ, ಮೈಸೂರು. |
| **ಡಾ. ನಿರಂಜನ್ ರಾಜ್ ಎಸ್**<br>ಹಣಕಾಸು ಅಧಿಕಾರಿಗಳು (ಕಾ/ಭಾ)<br>ಹಾಗೂ ಸ್ಕೂಲ್ ನಿರ್ದೇಶಕರು ಶಿಕ್ಷಣ ನಿಕಾಯ<br>ಮತ್ತು ನಿರ್ದೇಶಕರು, CIQA | **ಡಾ. ಎಸ್.ಆರ್. ಚಂದ್ರೇಗೌಡ**<br>ಡೀನ್ (ಅಧ್ಯಯನ ಕೇಂದ್ರಗಳು)<br>ಕರಾಮುವಿ, ಮೈಸೂರು. |
| **ಡಾ. ಪ್ರಕಾಶ**<br>ಗ್ರಂಥಪಾಲಕರು ಮತ್ತು ಸದಸ್ಯರು ಶೈಕ್ಷಣಿಕ<br>ಮಂಡಳಿ, ಕರಾಮುವಿ, ಮೈಸೂರು. | |
| **ಸ್ಕೂಲ್ ನಿರ್ದೇಶಕರು** | |
| **ಪ್ರೊ. ಎನ್.ಜಿ. ರಾಜು** | ವಿಜ್ಞಾನ ನಿಕಾಯ |
| **ಪ್ರೊ. ಸಿ. ಮಹದೇವಮೂರ್ತಿ** | ನಿರ್ವಹಣಾಶಾಸ್ತ್ರ ನಿಕಾಯ |
| **ಪ್ರೊ. ರಮಾನಂದ ಎಂ. ಎಸ್** | ವಾಣಿಜ್ಯ ನಿಕಾಯ |
| | |
| **ಶ್ರೀಮತಿ ಸುನೀತ** | ನಿರ್ದೇಶಕರು, ಸಿ.ಓ.ಇ. |
| **ಅನುಪಸ್ಥಿತರು** | |
| **ಪ್ರೊ. ಶಂಕರನಾರಣಪ್ಪ** | ಸಮಾಜ ವಿಜ್ಞಾನ ನಿಕಾಯ |

ಶೈಕ್ಷಣಿಕ ಮಂಡಳಿ ಸಭೆಯ ಅಧ್ಯಕ್ಷರ ಸೂಚನೆಯಂತೆ ಡೀನ್ (ಶೈಕ್ಷಣಿಕ) ರವರು ಶೈಕ್ಷಣಿಕ ಮಂಡಳಿ ಸಭೆಯ ಅಧ್ಯಕ್ಷರಾದ ಮಾನ್ಯ ಕುಲಪತಿಗಳನ್ನು ಸಭೆಗೆ ಸ್ವಾಗತಿಸಿ ಸಭೆಯಲ್ಲಿ ಹಾಜರಿದ್ದ ಶೈಕ್ಷಣಿಕ ಮಂಡಳಿ ಸದಸ್ಯರು ಹಾಗೂ ಸ್ಕೂಲ್ ನಿರ್ದೇಶಕರುಗಳನ್ನು 39ನೇ ಶೈಕ್ಷಣಿಕ ಮಂಡಳಿ ವಿಶೇಷ ಸಭೆಗೆ ಸ್ವಾಗತಿಸಿದರು.

ಮಾನ್ಯ ಕುಲಪತಿಗಳ ಸೂಚನೆಯಂತೆ ಡೀನ್ (ಶೈಕ್ಷಣಿಕ) ರವರು 39ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಗೆ ಮಂಡಿತವಾಗಿರುವ ವಿಷಯಗಳನ್ನು ಕ್ರಮವಾಗಿ ಸಭೆಗೆ ಮಂಡಿಸಿದರು.

ಕುಲಸಚಿವರು ಕುಲಪತಿಗಳು

**ವಿಷಯ ಸಂಖ್ಯೆ: 39.01**

**ವಿಷಯ :** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2013-14 ಮತ್ತು 2014-15ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ, ಡಿಪ್ಲೋಮಾ, ಸರ್ಟಿಫಿಕೇಟ್, ಮತ್ತು ಪಿಹೆಚ್.ಡಿ ಶಿಕ್ಷಣ ಕ್ರಮಗಳಿಗೆ ಪ್ರವೇಶಾತಿ ಪಡೆದು ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು 21ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ವಿತರಣೆ ಮಾಡುವ ವಿಷಯವನ್ನು ಶೈಕ್ಷಣಿಕ ಮಂಡಳಿ ಸಭೆಗೆ ಮಂಡಿಸುತ್ತಿರುವ ಬಗೆಗೆ.

**ಉಲ್ಲೇಖ:**

1. 21ನೇ ವಾರ್ಷಿಕ ಘಟಿಕೋತ್ಸವ-2026ರ ಅಧಿಸೂಚನೆ ಸಂಖ್ಯೆ: ಕರಾಮುವಿ/ಪವಿ/ಘವಿ/501/2025-26, ದಿನಾಂಕ: 15.11.2025
2. ಮಾನ್ಯ ಘನತೆವೆತ್ತ ಕುಲಾಧಿಪತಿಗಳ ಕಾರ್ಯಾಲಯದ **ಆದೇಶ ಸಂಖ್ಯೆ: GS 15 KOM 2025, Bengaluru, Dated 10th December, 2025.**

*****

ವಿಶ್ವವಿದ್ಯಾನಿಲಯದಲ್ಲಿ 2021-22 (ಜುಲೈ & ಜನವರಿ ಆವೃತ್ತಿ), 2022-23(ಜನವರಿ ಆವೃತ್ತಿ) ಮತ್ತು 2023-24(ಜನವರಿ ಆವೃತ್ತಿ)ನೇ ಶೈಕ್ಷಣಿಕ ಸಾಲಿಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಪ್ರವೇಶಾತಿ ಪಡೆದು ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ಪ್ರದಾನ ಮಾಡಲು 21ನೇ ವಾರ್ಷಿಕ ಘಟಿಕೋತ್ಸವ ಸಮಾರಂಭವನ್ನು ನಡೆಸಲು ಈಗಾಗಲೇ ಉಲ್ಲೇಖ(01)ರ ಅಧಿಸೂಚನೆಯಲ್ಲಿ ತೀರ್ಮಾನಿಸಲಾಗಿರುತ್ತದೆ.

ಮುಂದುವರೆದು ದಿನಾಂಕ:11.12.2025ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಮತ್ತು ಶಾಸನಬದ್ಧ ಅಧಿಕಾರಿಗಳ ಹಾಗೂ ಪರೀಕ್ಷಾ ವಿಭಾಗದ ಅಧಿಕಾರಿಗಳನ್ನೊಳಗೊಂಡ ಸಭೆಯಲ್ಲಿ ನಡೆದ ತೀರ್ಮಾನದಂತೆ 2013-14 ಮತ್ತು 2014-15ನೇ ಶೈಕ್ಷಣಿಕ ಸಾಲಿಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಇನ್-ಹೌಸ್‌ನ (In-House) ಸ್ನಾತಕ ಮತ್ತು ಸ್ನಾತಕೋತ್ತರ, ಡಿಪ್ಲೋಮಾ, ಸರ್ಟಿಫಿಕೇಟ್, ಮತ್ತು ಪಿಹೆಚ್.ಡಿ ಶಿಕ್ಷಣ ಕ್ರಮಗಳಿಗೆ ಪ್ರವೇಶಾತಿ ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರಗಳನ್ನು ಪ್ರದಾನ ಮಾಡಲು ಘನತೆವೆತ್ತ ಕುಲಾಧಿಪತಿಗಳು ಉಲ್ಲೇಖ(02)ರಲ್ಲಿ ಅಂಕಿತ ನೀಡಿರುವ ವಿಷಯವನ್ನು ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿ ಚರ್ಚಿಸಿದಂತೆ, ಉಲ್ಲೇಖ(01)ರ ಅಧಿಸೂಚನೆಯಲ್ಲಿ ತಿಳಿಸಿರುವ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳ ಜೊತೆಯಲ್ಲಿಯೇ ಸದರಿ ವಿದ್ಯಾರ್ಥಿಗಳಿಗೂ ಸಹ 2026ನೇ ಸಾಲಿನ ಜನವರಿ ಮಾಹೆಯ ಕೊನೆಯ ವಾರದಲ್ಲಿ ಘಟಿಕೋತ್ಸವ ಸಮಾರಂಭ ನಡೆಸುವ ವಿಷಯವನ್ನು ಶೈಕ್ಷಣಿಕ ಮಂಡಳಿ ಸಭೆಯ ಚರ್ಚೆ ಹಾಗೂ ನಿರ್ಣಯಕ್ಕಾಗಿ ವಿಷಯ ಮಂಡಿಸಿದೆ.

**ಚರ್ಚೆ**

ಮೊದಲಿಗೆ ಮಾನ್ಯ ಕುಲಪತಿಗಳು ಮಾತನಾಡಿ ವಿಶ್ವವಿದ್ಯಾನಿಲಯದಲ್ಲಿ 2013-14 ಮತ್ತು 2014-15ನೇ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ, ಡಿಪ್ಲೋಮಾ, ಸರ್ಟಿಫಿಕೇಟ್, ಮತ್ತು ಪಿಹೆಚ್.ಡಿ ಶಿಕ್ಷಣ ಕ್ರಮಗಳಿಗೆ ಪ್ರವೇಶಾತಿ ಶಿಕ್ಷಣ ಕ್ರಮಗಳಿಗೆ ಪ್ರವೇಶಾತಿ ಪಡೆದು ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಮತ್ತು ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ವಿತರಣೆ ಮಾಡುವ ಸಂಬಂಧ ಮಾನ್ಯ ಕುಲಾಧಿಪತಿಗಳ ದಿನಾಂಕ: 10.12.2025ರ ಆದೇಶದಲ್ಲಿ ತಿಳಿಸಲಾಗಿದ್ದು, ಅದರಂತೆ, ಸದರಿ ಸಾಲುಗಳ ಇನ್‌ಹೌಸ್ non-technical ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಮತ್ತು ಪದವಿ ಪ್ರಮಾಣ ಪತ್ರಗಳನ್ನು ವಿತರಿಸುವ ಬಗ್ಗೆ ಕ್ರಮವಹಿಸುವ ಸಂಬಂಧ ವಿವರವಾಗಿ ಚರ್ಚಿಸಿ ನಿರ್ಣಯ ಕೈಗೊಳ್ಳಲು ಎಲ್ಲಾ ಶೈಕ್ಷಣಿಕ ಮಂಡಳಿ ಸದಸ್ಯರು ಅಭಿಪ್ರಾಯ / ತೀರ್ಮಾನಗಳನ್ನು ಸೂಚಿಸುವಂತೆ ತಿಳಿಸಿದರು.

ಕುಲಸಚಿವರು | ಕುಲಪತಿಗಳು

ಡೀನ್ (ಶೈಕ್ಷಣಿಕ) ರವರು ಮಾತನಾಡಿ ಮಾನ್ಯ ಕುಲಪತಿಗಳ ನಿರಂತರ ಪ್ರಯತ್ನದಿಂದಾಗಿ ವಿಶ್ವವಿದ್ಯಾನಿಲಯಕ್ಕೆ ನ್ಯಾಕ್ ಮಾನ್ಯತೆ, ಎನ್.ಐ.ಆರ್.ಎಫ್ 2ನೇ ರ್‍ಯಾಂಕ್ ದೊರೆತಿದ್ದು ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಯು ಸಹ ಹೆಚ್ಚಾಗಿರುತ್ತದೆ. 2013–14 ಮತ್ತು 2014–15ನೇ ಸಾಲಿನ ಇನ್‌ಹೌಸ್ ವಿದ್ಯಾರ್ಥಿಗಳ ಬಹಳಷ್ಟು ವರ್ಷಗಳ ಸಮಸ್ಯೆಯನ್ನು ಬಗೆಹರಿಸುವ ಸಂಬಂಧ ಮಾನ್ಯ ಕುಲಪತಿಗಳ ನಿರಂತರ ಪ್ರಯತ್ನದಿಂದಾಗಿ ಸದರಿ ಸಾಲಿನ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಮತ್ತು ಪದವಿ ಪ್ರಮಾಣ ಪತ್ರ ವಿತರಿಸುವಂತೆ ಆದೇಶವಾಗಿದ್ದು ಈ ಸಂಬಂಧ ಕುಲಪತಿಗಳಿಗೆ ಧನ್ಯವಾದಗಳನ್ನು ತಿಳಿಸಿದರು.

ಶೈಕ್ಷಣಿಕ ಮಂಡಳಿಯ ಎಲ್ಲಾ ಮಾನ್ಯ ಸದಸ್ಯರು ಪ್ರತ್ಯೇಕವಾಗಿ ಮಾತನಾಡಿ ಬಹಳಷ್ಟು ವರ್ಷಗಳಿಂದ ಸಂಕಷ್ಟದಲ್ಲಿದ್ದ 2013–14 ಮತ್ತು 2014–15ನೇ ಸಾಲಿನ ಇನ್‌ಹೌಸ್ ವಿದ್ಯಾರ್ಥಿಗಳ ತೊಂದರೆಯನ್ನು ಅರಿತು ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ಮಾನ್ಯ ಕುಲಪತಿಗಳು ಘನತೆವೆತ್ತ ಕುಲಾಧಿಪತಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಪೂರಕ ದಾಖಲೆ / ಮಾಹಿತಿಯನ್ನು ಒದಗಿಸುವುದರೊಂದಿಗೆ ವಿದ್ಯಾರ್ಥಿಗಳ ತೊಂದರೆಯನ್ನು ಸಮಪರ್ಕವಾಗಿ ಮನದಟ್ಟು ಮಾಡುವ ಮೂಲಕ ಸದರಿ ಸಾಲಿನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಆದೇಶ ಹೊರಬರಲು ಸಾಧ್ಯವಾಗಿರುವುದಕ್ಕೆ ಎಲ್ಲಾ ಮಾನ್ಯ ಸದಸ್ಯರುಗಳು ಮಾನ್ಯ ಕುಲಪತಿಗಳಿಗೆ ಅಭಿನಂದನೆಗಳನ್ನು ತಿಳಿಸಿ ಸದರಿ ಸಾಲುಗಳ ವಿದ್ಯಾರ್ಥಿಗಳಿಗೆ 21ನೇ ವಾರ್ಷಿಕ ಘಟಿಕೋತ್ಸವದಲ್ಲೇ ಪದವಿ ಪ್ರಮಾಣ ಪತ್ರಗಳನ್ನು ವಿತರಿಸಲು ಒಮ್ಮತದ ತೀರ್ಮಾನ ಕೈಗೊಳ್ಳುವುದು ಸೂಕ್ತ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮುಂದುವರೆದು, ಈ ಆದೇಶದಿಂದಾಗಿ ವಿದ್ಯಾರ್ಥಿಗಳಲ್ಲಿದ್ದ ಗೊಂದಲ ನಿವಾರಣೆಯಾಗಿ ಮುಂದಿನ ದಿನಗಳಲ್ಲಿ ಪ್ರವೇಶಾತಿ ಸಂಖ್ಯೆಯು ಸಹ ಹೆಚ್ಚಾಗುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ತಿಳಿಸಿದರು. ಪ್ರಸ್ತುತ ಘನತೆವೆತ್ತ ಕುಲಾಧಿಪತಿಗಳ ಆದೇಶದ ಬಗೆಗಿನ ಮಾಹಿತಿಯನ್ನು ಮಾಧ್ಯಮಗಳಲ್ಲಿ ಪ್ರಚಾರ ಮಾಡುವುದರೊಂದಿಗೆ ವಿಶ್ವವಿದ್ಯಾನಿಲಯದ ವೆಬ್‌ಸೈಟ್ ನಲ್ಲೂ ಪ್ರಕಟಿಸುವುದು ಉತ್ತಮ ಎಂದು ಸಲಹೆ ನೀಡಿದರು.

ಕುಲಸಚಿವ (ಪರೀಕ್ಷಾಂಗ) ರವರು ಮಾತನಾಡಿ ಮಾನ್ಯ ಕುಲಪತಿಗಳ ನಿರಂತರ ಪ್ರಯತ್ನದಿಂದಾಗಿ ವಿಶ್ವವಿದ್ಯಾನಿಲಯಕ್ಕೆ ಬಹಳಷ್ಟು ವರ್ಷಗಳಿಂದ ಅಂಟಿದ್ದ ಕಪ್ಪು ಚುಕ್ಕೆಯನ್ನು ಅಳಿಸಿದಂತಾಗಿರುತ್ತದೆ. ಮಾನ್ಯ ಕುಲಪತಿಗಳ ನಿರಂತರ ಪ್ರಯತ್ನವೆ ಈ ಯಶಸ್ಸಿಗೆ ಕಾರಣ ಆದ್ದರಿಂದ ಮಾನ್ಯ ಕುಲಪತಿಗಳಿಗೆ ವಿಶ್ವವಿದ್ಯಾನಿಲಯದ ಪರವಾಗಿ ಹಾಗೂ ವಿದ್ಯಾರ್ಥಿಗಳ ಪರವಾಗಿ ಧನ್ಯವಾದಗಳನ್ನು ತಿಳಿಸಿದರು.

2013–14 ಮತ್ತು 2014–15ನೇ ಸಾಲಿನಲ್ಲಿ ಒಟ್ಟಾರೆ ಯು.ಜಿ. 7169 ವಿದ್ಯಾಥಿಗಳು ಮತ್ತು ಪಿ.ಜಿ. ಅಂದಾಜು 43,913 ವಿದ್ಯಾರ್ಥಿಗಳಿದ್ದು, ಡಿಪ್ಲೋಮಾ, ಸರ್ಟಿಫಿಕೇಟ್ ಮತ್ತು ಪಿಹೆಚ್.ಡಿ ವಿಷಯಗಳಿಂದ ಸುಮಾರು ಐವತ್ತು ಸಾವಿರ ವಿದ್ಯಾರ್ಥಿಗಳಿದ್ದು ಸದರಿ ಸಾಲಿನ ವಿದ್ಯಾರ್ಥಿಗಳ ಎಲ್ಲಾ ಸಾಫ್ಟ್ ಮತ್ತು ಹಾರ್ಡ್‌ಕಾಪಿಗಳು ಪರೀಕ್ಷಾ ವಿಭಾಗದಲ್ಲಿ ಲಭ್ಯವಿದ್ದು ಅವುಗಳನ್ನು ಪರಿಶೀಲಿಸಿ ರ್‍ಯಾಂಕ್‌ಲಿಸ್ಟ್ ಪ್ರಕಟಿಸಬೇಕಿರುವುದಾಗಿ ತಿಳಿಸಿದರು.

ಮಾನ್ಯ ಕುಲಸಚಿವರು ಮಾತನಾಡಿ ಮಾನ್ಯ ಕುಲಪತಿಗಳ ನಾಯಕತ್ವದಲ್ಲಿ ವಿಶ್ವವಿದ್ಯಾನಿಲಯದ ಅನೇಕ ಅಭಿವೃದ್ಧಿ ಕಾರ್ಯಗಳು ಹಾಗೂ ಉತ್ತಮ ಶೈಕ್ಷಣಿಕ ಚಟುವಟಿಕೆಗಳಾಗುತ್ತಿದ್ದು ಪ್ರಸ್ತುತ 2013–14 ಮತ್ತು 2014–15ನೇ ಸಾಲಿನ ವಿದ್ಯಾರ್ಥಿಗಳ ಬಹಳಷ್ಟು ವರ್ಷಗಳ ಸಮಸ್ಸೆಯನ್ನು ಬಗೆಹರಿಸುವಲ್ಲೂ ಮಾನ್ಯ ಕುಲಪತಿಗಳ ಪ್ರಯತ್ನ ಬಹಳಷ್ಟಿದ್ದು ಮಾನ್ಯ ಕುಲಪತಿಗಳಿಗೆ ವೈಕ್ತಿಕವಾಗಿ ಹಾಗೂ ವಿಶ್ವವಿದ್ಯಾನಿಲಯದ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳ ಪರವಾಗಿ ಧನ್ಯವಾದಗಳನ್ನು ತಿಳಿಸಿದರು.

ಮಾನ್ಯ ಕುಲಪತಿಗಳು ಮಾತನಾಡಿ ವಿಶ್ವವಿದ್ಯಾನಿಲಯದ ಕುಲಪತಿಯಾಗಿ ನನ್ನ ಅಧಿಕಾರ ವ್ಯಾಪ್ತಿಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗೆ ಹಾಗೂ ವಿಶ್ವವಿದ್ಯಾನಿಲಯದ ಅಭಿವೃದ್ಧಿಗೆ ಸದಾಕಾಲ ಪ್ರಯತ್ನಿಸವುದಾಗಿ ತಿಳಿಸಿದರು ಮತ್ತು ಈ ಪ್ರಯತ್ನದಲ್ಲಿ ಹಣಕಾಸು ಅಧಿಕಾರಿಗಳಾದ ಡಾ. ನಿರಂಜನರ್ ರಾಜ್ ರವರ ಸಹಕಾರವು ಬಹಳಷ್ಟಿರುವುದಾಗಿ ವಿವರಿಸಿ ಅವರಿಗೆ ಧನ್ಯವಾದಗಳನ್ನು ತಿಳಿಸಿದರು.

ಕುಲಸಚಿವರು | ಕುಲಪತಿಗಳು

ಅಂತಿಮವಾಗಿ ದಿನಾಂಕ: 10.12.2025ರ ಆದೇಶದಂತೆ 2013–14 ಮತ್ತು 2014–15ನೇ ಸಾಲಿನ ಇನ್‌ಹೌಸ್ ನಾನ್‌ಟೆಕ್ನಿಕಲ್ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಮತ್ತು ಘಟಿಕೋತ್ಸವ ಪ್ರಮಾಣ ಪತ್ರ ನೀಡುವ ಬಗ್ಗೆ ಕೆಳಕಂಡಂತೆ ತೀರ್ಮಾನ ಕೈಗೊಳ್ಳಲಾಯಿತು.

ತೀರ್ಮಾನ:

1. **ದಿನಾಂಕ: 10.12.2025 ರ ಘನತೆವೆತ್ತ ಕುಲಾಧಿಪತಿಗಳ ಆದೇಶದಂತೆ 2013–14 ಮತ್ತು 2014–15ನೇ ಸಾಲಿನ ಇನ್‌ಹೌಸ್ ನಾನ್ ಟೆಕ್ನಿಕಲ್ ಸ್ನಾತಕ ಮತ್ತು ಸ್ನಾತಕೋತ್ತರ, ಡಿಪ್ಲೋಮಾ, ಸರ್ಟಿಫಿಕೇಟ್, ಮತ್ತು ಪಿಹೆಚ್.ಡಿ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ಪ್ರಮಾಣ ಪತ್ರವನ್ನು 21ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ವಿತರಿಸಲು ಒಮ್ಮತದ ತೀರ್ಮಾನ ಕೈಗೊಳ್ಳಲಾಯಿತು.**
2. **ದಿನಾಂಕ: 10.12.2025 ರ ಘನತೆವೆತ್ತ ಕುಲಾಧಿಪತಿಗಳ ಆದೇಶಕ್ಕೆ ಸಂಬಂಧಿಸಿದಂತೆ ಪ್ರಸ್ತುತ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಕೈಗೊಂಡಿರುವ ತೀರ್ಮಾನಗಳಂತೆ ಕ್ರಮವಹಿಸುವ ಬಗ್ಗೆ ಕುಲಸಚಿವರು ಆದೇಶ ಹೊರಡಿಸುವುದು.**
3. **ಯಾವುದೇ ದಂಡ ಶುಲ್ಕ, ಪರಿಶೀಲನಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ವಿಧಿಸದೆ ಘಟಿಕೋತ್ಸವ ಶುಲ್ಕವಷ್ಟೆ ಭರಿಸಿಕೊಳ್ಳುವುದು ಮತ್ತು ಈ ಬಗ್ಗೆ ಪರೀಕ್ಷಾ ವಿಭಾಗದಿಂದ ಅಧಿಸೂಚನೆ ಹೊರಡಿಸುವುದು.**

-----

<u>ಅಧ್ಯಕ್ಷರ ಒಪ್ಪಿಗೆ ಮೇರೆಗೆ ಚರ್ಚಿತವಾದ ವಿಷಯಗಳು</u>

ವಿಷಯ: ಸ್ನಾತಕೋತ್ತರ ಸಮಾಜ ಕಾರ್ಯದ (MSW) ಪ್ರಥಮ ಬ್ಯಾಚ್‌ನ (ಜುಲೈ 2023–24ರ ಆವೃತ್ತಿ) ವಿದ್ಯಾರ್ಥಿಗಳಿಗೆ 2025ರ ಜನವರಿಯಲ್ಲಿ ಜರಗುವ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪ್ರಮಾಣ ಪತ್ರ ಪಡೆಯಲು ಅನುಮತಿ ಕೋರಿ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಮಾಜ ಕಾರ್ಯ ಅಧ್ಯಯನ ವಿಭಾಗದಲ್ಲಿ ಜುಲೈ 2023–24ರ ಆವೃತ್ತಿಯಲ್ಲಿ ಪ್ರವೇಶಾತಿ ಪಡೆದ MSW ಪ್ರಥಮ ಬ್ಯಾಚ್‌ನ ವಿದ್ಯಾರ್ಥಿಗಳ ನಾಲ್ಕನೇ ಸೆಮಿಸ್ಟರ್‌ನ ಫಲಿತಾಂಶ ಈಗಾಗಲೇ ಪ್ರಕಟಗೊಂಡಿರುವ ಹಿನ್ನಲೆಯಲ್ಲಿ ಹಾಗೂ ವಿದ್ಯಾರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗಕ್ಕೆ ಅರ್ಜಿ ಸಲ್ಲಿಸಲು ಅತ್ಯಾವಶ್ಯಕವಾಗಿರುವುದರಿಂದ ವಿದ್ಯಾರ್ಥಿಗಳ ಮನವಿಯನ್ನು ಪರಿಗಣಿಸಿ ಸ್ನಾತಕೋತ್ತರ ಸಮಾಜ ಕಾರ್ಯದ (MSW) ಪ್ರಥಮ ಬ್ಯಾಚ್‌ನ ವಿದ್ಯಾರ್ಥಿಗಳಿಗೆ 2025ರ ಜನವರಿಯಲ್ಲಿ ಜರಗುವ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪ್ರಮಾಣ ಪತ್ರ ಪಡೆಯಲು ಅವಕಾಶ ಮಾಡಿಕೊಡಬೇಕೆಂದು ವಿಭಾಗದ ಅಧ್ಯಕ್ಷರಾದ ಪ್ರೊ. ಬಿ.ಎಸ್. ಗುಂಜಾಳ್ ರವರು ಕೋರಿರುವ ಅಂಶದ ಬಗ್ಗೆ ವಿವರವಾಗಿ ಸಭೆಯಲ್ಲಿ ಚರ್ಚಿಸಿ ಕೆಳಕಂಡಂತೆ ತೀಮಾನ ಕೈಗೊಳ್ಳಲಾಯಿತು.

ತೀರ್ಮಾನ:

**ಜುಲೈ 2023–24ರ ಆವೃತ್ತಿಯಲ್ಲಿ ಪ್ರವೇಶಾತಿ ಪಡೆದ MSW ಪ್ರಥಮ ಬ್ಯಾಚ್‌ನ ವಿದ್ಯಾರ್ಥಿಗಳ ನಾಲ್ಕನೇ ಸೆಮಿಸ್ಟರ್‌ನ ಫಲಿತಾಂಶ ಈಗಾಗಲೇ ಪ್ರಕಟಗೊಂಡಿರುವ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಯಿಂದ MSW ಸೇರಿದಂತೆ ಸದರಿ ಸಾಲಿನಲ್ಲಿ ಪ್ರವೇಶಾತಿ ಪಡೆದು ನಾಲ್ಕನೇ ಸೆಮಿಸ್ಟರ್‌ನ ಫಲಿತಾಂಶ ಪ್ರಕಟವಾಗಿರುವ ಎಲ್ಲಾ ಪಿ.ಜಿ. ಮತ್ತು ಆರನೇ ಸೆಮಿಸ್ಟರ್ ಫಲಿತಾಂಶ ಪ್ರಕಟವಾಗಿರುವ ಯು.ಜಿ. ವಿಷಯಗಳ ವಿದ್ಯಾರ್ಥಿಗಳಿಗೆ 21ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಘಟಿಕೋತ್ಸವ ಪ್ರಮಾಣ ಪತ್ರ ವಿತರಿಸಲು ಎಲ್ಲಾ ಸದಸ್ಯರುಗಳ ಒಮ್ಮತದೊಂದಿಗೆ ಅನುಮೋದನೆ ನೀಡಿದರು.**

ಕುಲಸಚಿವರು

ಕುಲಪತಿಗಳು

ಅಂತಿಮವಾಗಿ ಕುಲಸಚಿವರು 39ನೇ ಶೈಕ್ಷಣಿಕ ಮಂಡಳಿ ವಿಶೇಷ ಸಭೆಗೆ ಆಗಮಿಸಿ, ಮಂಡಿತ ವಿಷಯದ ಬಗ್ಗೆ ಚರ್ಚಿಸಿ, ತಮ್ಮ ಅಮೂಲ್ಯ ಸಲಹೆ, ಸೂಚನೆಗಳನ್ನು ನೀಡಿ, ಸಭೆಯನ್ನು ಸುಸೂತ್ರವಾಗಿ ನಡೆಸಿಕೊಟ್ಟ ಸಭೆಯ ಅಧ್ಯಕ್ಷರು ಹಾಗೂ ಎಲ್ಲಾ ಸದಸ್ಯರುಗಳಿಗೆ ಕುಲಸಚಿವರು ಧನ್ಯವಾದಗಳನ್ನು ತಿಳಿಸುವುದರೊಂದಿಗೆ ಸಭೆಯು ಮುಕ್ತಾಯಗೊಂಡಿತು.

ಕುಲಸಚಿವರು ಹಾಗೂ
ಸದಸ್ಯ ಕಾರ್ಯದರ್ಶಿಗಳು

ಕುಲಪತಿಗಳು ಹಾಗೂ ಅಧ್ಯಕ್ಷರು